ಬಾಲಕಾರ್ಮಿಕರಿರುವುದು ನಿಮ್ಮ ಗಮನಕ್ಕೆ ಬಂದಿದೆಯೇ? ಎಲ್ಲಾ ಕಡೆ ಬಾಲಕಾರ್ಮಿಕರನ್ನು ಇಟ್ಟುಕೊಂಡು, ಅವರಿಂದ ಕೆಲಸ ಮಾಡಿಸಿಕೊಳ್ಳುತ್ತಾ, ಅವರನ್ನು ಯಾವ ರೀತಿ ತೊಂದರೆಗೆ, ಹಿಂಸೆಗೆ ಒಳಮಾಡಲಾಗುತ್ತಿದೆ ಎನ್ನುವುದಾದರೂ ಸಚಿವರಿಗೆ ಗೊತ್ತಿದೆಯೇ? ಅದರ ಬಗ್ಗೆ ಏನು ಕ್ರಮ ತೆಗೆದುಕೊಳ್ಳುತ್ತಾರೆ ಎನ್ನುವುದನ್ನು ಹೇಳಬೇಕು.

ಶ್ರೀ ಎ.ಎಂ.ಹಿಂಡಸಗೇರಿ: ಮಾನ್ಯ ಸದಸ್ಯರು ಹೇಳುತ್ತಿರುವಂತೆ ಶೇಕಡ 70ರಷ್ಟು ಹೋಟೆಲ್‌ಗಳಲ್ಲಿ ಬಾಲಕಾರ್ಮಿಕರಿದ್ದಾರೆ ಎನ್ನುವುದು ಸರಿಯಲ್ಲ. ಹಾಗೆ ನೋಡಿದರೆ ಈಗಿರುವ ಸುಮಾರು 11 ಸಾವಿರ ಹೋಟೆಲ್‌ಗಳಲ್ಲಿ 8 ಸಾವಿರ ಬಾಲಕಾರ್ಮಿಕರಿದ್ದಾರೆಂದು ಆಗುತ್ತದೆ. ಬಾಲಕಾರ್ಮಿಕರ ಸಲುವಾಗಿ ನಮ್ಮ ಅಧಿಕಾರಿಗಳು ವಿಶೇಷವಾದ ಗಮನ ಹರಿಸಿ ನೋಡುತ್ತಿದ್ದಾರೆ. ಅಂಥ ಪ್ರಕರಣಗಳು ನಿಮ್ಮ ಗಮನಕ್ಕೆ ಬಂದರೆ, ಅದನ್ನು ನಮಗೆ ತಿಳಿಸಿದರೆ ನಾವು ಸೂಕ್ತವಾದ ಕ್ರಮ ತೆಗೆದುಕೊಳ್ಳುತ್ತೇವೆ.

ಆ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳ 5ನೇ ಪಟ್ಟಿಯಲ್ಲಿರುವ 160 ಪ್ರಶ್ನೆಗಳ ಪೈಕಿ 145 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ತೀರ್ಥಹಳ್ಳಿಯಲ್ಲಿ ಕ್ರೀಡಾಂಗಣ ನಿರ್ಮಾಣ.

506(889)

ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಯುವಜನ ಸೇವೆಗಳು ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೀರ್ಥಹಳ್ಳಿಯಲ್ಲಿ ಕ್ರೀಡಾಂಗಣ ನಿರ್ಮಾಣಕ್ಕಾಗಿ ಎಷ್ಟು ಜಾಗವನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ?

ಆ) ಈ ಕ್ರೀಡಾಂಗಣ ನಿರ್ಮಾಣಕ್ಕಾಗಿ ಸರ್ಕಾರ ಅನುದಾನ ಮಂಜೂರು

ಮಾಡಿದೆಯೇ? ಈ ಅನುದಾನದಲ್ಲಿ ಇದುವರೆಗೆ ಎಷ್ಟು ವೆಚ್ಚ ಮಾಡಲಾಗಿದೆ.

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್ (ಯುವಜನ ಸೇವೆಗಳು ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ) 6.25 ಎಕರೆಗಳು.

ಆ) ಈ ಕ್ರೀಡಾಂಗಣ ನಿರ್ಮಾಣಕ್ಕೆ ಜಿಲ್ಲಾ ಪಂಚಾಯತ್ ವತಿಯಿಂದ ರೂ. 5.62 ಲಕ್ಷ ಬಿಡುಗಡೆ ಮಾಡಿದೆ. ಇಲ್ಲಿಯವರೆಗೆ ಯಾವುದೇ ಹಣವನ್ನು ವೆಚ್ಚ ಮಾಡಿರುವುದಿಲ್ಲ.

ಬೆಳಗಾವಿ ಜಿಲ್ಲೆಯ ರಸ್ತೆಗಳ ಸುಧಾರಣೆ.

507(126)

ಶ್ರೀ ಅಪಯ್ಯಗೌಡ ಬಸಗೌಡ ಪಾಟೀಲ(ಸಂಕೇಶ್ವರ):ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬೆಳಗಾವಿ ಜಿಲ್ಲೆಯ ಎಲ್ಲಾ ರಸ್ತೆಗಳು ಕೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2. ಕಳೆದ ಸಾಲಿನಲ್ಲಿ ಈ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದೆಂದು ತಿಳಿಸಿದ್ದರೂ ಸಹ ಇಲ್ಲಿಯವರೆಗೆ ಸುಧಾರಣೆ ಮಾಡದಿರಲು ಕಾರಣಗಳೇನು?

3. ಹಾಗಿದ್ದಲ್ಲಿ, ಈ ರಸ್ತೆಗಳ ಸುಧಾರಣೆಯನ್ನು ಎಂದು ಮಾಡಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

1. ಬೆಳಗಾವಿ ಜಿಲ್ಲೆಯ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ರಸ್ತೆಗಳ ರಿಪೇರಿಯ ಅವಶ್ಯಕತೆ ಸರ್ಕಾರದ ಗಮನಕ್ಕೆ ಬಂದಿದೆ.

2. ಬೆಳಗಾವಿ ಜಿಲ್ಲೆಯಲ್ಲಿ ರಸ್ತೆ ಸುಧಾರಣೆಯನ್ನು ಕೆಳಗಿನ ಕಾರ್ಯಕ್ರಮಗಳಡಿಯಲ್ಲಿ ಮಾಡಲಾಗುತ್ತಿದೆ.

೧. ವಾರ್ಷಿಕ ನಿರ್ವಹಣೆಯಡಿ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಲಾಗಿದೆ.